## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಡೆಸಲಾಗುತ್ತಿರುವ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಉನ್ನತೀಕರಿಸುವ / ಪರಿವರ್ತಿಸುವ/ ಮಾರ್ಪಾಡಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:** ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಏಕ ಕಡತ ಸಂಖ್ಯೆ: SWD/EDU/ED6/256/2022 (E-974703).

*****

**ಪ್ರಸ್ತಾವನೆ:-**

ಮೇಲೆ ಓದಲಾದ ಏಕ ಕಡತದಲ್ಲಿ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ನಡೆಸಲಾಗುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಸಂಖ್ಯಾಬಲ ಕೊರತೆಯಿಂದಾಗಿ ಅಥವಾ ಇನ್ನಿತರೆ ಕಾರಣದಿಂದಾಗಿ, ವಿದ್ಯಾರ್ಥಿನಿಲಯಗಳನ್ನು ನಡೆಸಲು ಕಷ್ಟಸಾಧ್ಯವಿದ್ದಲ್ಲಿ, ಅಂತಹ ವಿದ್ಯಾರ್ಥಿನಿಲಯಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನಾಗಿ ಪರಿವರ್ತಿಸಲು ಪ್ರಸ್ತಾವನೆಯನ್ನು ಆಯಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಸ್ಪಷ್ಟ ಅಭಿಪ್ರಾಯದೊಂದಿಗೆ ಸಲ್ಲಿಸುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರು ಸೂಚನೆ ನೀಡಿರುತ್ತಾರೆ.

ಅದರಂತೆ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ಮತ್ತು ತುಮಕೂರು ಜಿಲ್ಲೆ ಇವರು ಬೆಂಗಳೂರು ನಗರ ಜಿಲ್ಲೆ ಮತ್ತು ತುಮಕೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯ ವಿದ್ಯಾರ್ಥಿನಿಲಯಗಳಲ್ಲಿ ಕಳೆದ ಮೂರು ವರ್ಷಗಳಿಂದ ಮಂಜೂರಾತಿ ಸಂಖ್ಯೆಗಿಂತ ದಾಖಲಾತಿ ಪ್ರಮಾಣವು ಶೇ.50% ರಷ್ಟು ಕಡಿಮೆಯಾಗಿರುವುದರಿಂದ ಹಾಗೂ ಕೋವಿಡ್ ಹಿನ್ನೆಲೆಯಲ್ಲಿ ದಾಖಲಾತಿ ಪ್ರಮಾಣವು ಇನ್ನೂ ಕಡಿಮೆಯಾಗಿರುವುದರಿಂದ ಸದರಿ ವಿದ್ಯಾರ್ಥಿ ನಿಲಯಗಳನ್ನು ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನಾಗಿ ಪರಿವರ್ತಿಸಲು ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : SWD/EDU/ED6/256/2022 (E-974703)ಬೆಂಗಳೂರು ದಿನಾಂಕ: 23ನೇ ಮಾರ್ಚ್ 2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಬೆಂಗಳೂರು ನಗರ ಜಿಲ್ಲೆ ಮತ್ತು ತುಮಕೂರು ಜಿಲ್ಲೆಯ ವ್ಯಾಪ್ತಿಯಲ್ಲಿ

ನಡೆಯುತ್ತಿರುವ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳನ್ನು ಅನುಬಂಧದಲ್ಲಿರುವಂತೆ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನಾಗಿ ಪರಿವರ್ತಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/03/2023
(ಎಂ.ಜಿ. ವೆಂಕಟೇಶಯ್ಯ)
ಸರ್ಕಾರದ ಉಪ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:-**

1. ಮಹಾಲೇಖಪಾಲರು (ಎ&ಇ ಲೆಕ್ಕ ಪರಿಶೋಧನೆ 1,2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಮತ್ತು ತುಮಕೂರು ಜಿಲ್ಲೆ, ಬೆಂಗಳೂರು ನಗರ ಮತ್ತು ತುಮಕೂರು.
4. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಮತ್ತು ತುಮಕೂರು ಜಿಲ್ಲೆ, ಬೆಂಗಳೂರು ನಗರ ಮತ್ತು ತುಮಕೂರು.
5. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ನಗರ ಮತ್ತು ತುಮಕೂರು ಜಿಲ್ಲೆ, ಬೆಂಗಳೂರು ನಗರ ಮತ್ತು ತುಮಕೂರು.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕ್ಲಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ
3. ಸರ್ಕಾರದ ಉಪ ಕಾರ್ಯದರ್ಶಿ-1, ಸಮಾಜ ಕಲ್ಯಾಣ ಇಲಾಖೆ ರವರ ಆಪ್ತ ಸಹಾಯಕರು, ವಿಕಾಸಸೌಧ.

*****

# ಅನುಬಂಧ

| ಕ್ರ.ಸಂ | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ಪರಿವರ್ತಿಸಿದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿವರ |
|---|---|---|---|
| **ಬೆಂಗಳೂರು ಉತ್ತರ ತಾಲ್ಲೂಕು** | | | |
| 1 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಚಿಕ್ಕಜಾಲ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಚಿಕ್ಕಜಾಲ |
| 2 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಯಲಹಂಕ | 90 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಯಲಹಂಕ |
| 3 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೊಡಿಗೆಹಳ್ಳಿ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಕೊಡಿಗೆಹಳ್ಳಿ |
| 4 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಜಕ್ಕೂರು | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಜಕ್ಕೂರು |
| 5 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮಲ್ಲತ್ತಹಳ್ಳಿ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಮಲ್ಲತ್ತಹಳ್ಳಿ |
| 6 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಎಂ.ಆರ್.ಸಿ.ಆರ್. ಲೇಔಟ್, ವಿಜಯನಗರ | 85 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಎಂ.ಆರ್.ಸಿ.ಆರ್. ಲೇಔಟ್, ವಿಜಯನಗರ |
| 7 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೋದಂಡರಾಮನಗರ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಕೋದಂಡರಾಮನಗರ |
| **ಬೆಂಗಳೂರು ದಕ್ಷಿಣ ತಾಲ್ಲೂಕು** | | | |
| 8 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಚಾಮರಾಜಪೇಟೆ | 85 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಚಾಮರಾಜಪೇಟೆ |
| 9 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಜಯನಗರ (ಮೇಲ್ಮಹಡಿ) | 75 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಜಯನಗರ (ಮೇಲ್ಮಹಡಿ) |
| 10 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ತಾವರೆಕೆರೆ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ತಾವರೆಕೆರೆ |

---2

| | | | |
|---|---|---|---|
| **ಬೆಂಗಳೂರು ಪೂರ್ವ ತಾಲ್ಲೂಕು** | | | |
| 11 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹೂಡಿ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಹೂಡಿ |
| 12 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಾಡುಗೋಡಿ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಕಾಡುಗೋಡಿ |
| 13 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಕೆ.ಆರ್.ಪುರಂ, (ಟಿ.ಸಿ.ಪಾಳ್ಯ) | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಕೆ.ಆರ್.ಪುರಂ, (ಟಿ.ಸಿ.ಪಾಳ್ಯ) |
| 14 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಮಾರತಹಳ್ಳಿ | 65 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಮಾರತಹಳ್ಳಿ |
| **ಆನೇಕಲ್ ತಾಲ್ಲೂಕು** | | | |
| 15 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಆನೇಕಲ್ | 80 | ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಬೆಂಗಳೂರು ದಕ್ಷಿಣ ತಾಲ್ಲೂಕು |
| **ತುಮಕೂರು ಜಿಲ್ಲೆ** | | | |
| 16 | ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹೆಗ್ಗೆರೆ ಗ್ರಾಮ, ತುಮಕೂರು ತಾಲ್ಲೂಕು | | ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಹೆಗ್ಗೆರೆ ಗ್ರಾಮ, ತುಮಕೂರು ತಾಲ್ಲೂಕು |

23/03/2023

(ಎಂ.ಜಿ. ವೆಂಕಟೇಶಯ್ಯ)

ಸರ್ಕಾರದ ಉಪ ಕಾರ್ಯದರ್ಶಿ-1,

ಸಮಾಜ ಕಲ್ಯಾಣ ಇಲಾಖೆ.